## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 152 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಸ್. ರುದ್ರೇಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13/12/2021 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು, ಯಾದಗಿರಿ, ಹಾವೇರಿ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರಗಳಲ್ಲಿ ಸರ್ಕಾರದ ವೈದ್ಯಕೀಯ ಕಾಲೇಜುಗಳ ಪ್ರಾರಂಭಕ್ಕೆ ಮತ್ತು ಪ್ರವೇಶಕ್ಕೆ ಸರ್ಕಾರ ಅನುಮೋದನೆ ನೀಡಲಾಗಿದೆಯೇ? | ಹೌದು |
| ಆ) | ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದಲ್ಲಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಹಾವೇರಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ 150 ಎಂಬಿಬಿಎಸ್ ಸೀಟುಗಳ ಪ್ರವೇಶ ಮಿತಿಯೊಂದಿಗೆ 2021-22 ನೇ ಸಾಲಿನಿಂದ ಪ್ರಾರಂಭಿಸಲು ರಾಜ್ಯ ಸರ್ಕಾರದ ವತಿಯಿಂದ ಅನುಮೋದನೆಯನ್ನು ನೀಡಲಾಗಿರುತ್ತದೆ.<br>ಕೇಂದ್ರ ಸರ್ಕಾರದಿಂದ ಅನುಮತಿ ಪತ್ರ (LOP) ನೀಡುವಂತೆ Medical Assessment and Rating Board (MARB) ಗೆ ದಿನಾಂಕ 13/10/2021 ರಂದು ಸರ್ಕಾರದಿಂದ ಪತ್ರ ಬರೆಯಲಾಗಿತ್ತು. ಆದರೆ ಸದರಿ ಕಾಲೇಜುಗಳನ್ನು 2021-22 ನೇ ಸಾಲಿನಿಂದ ಪ್ರಾರಂಭಿಸಲು MARB ವತಿಯಿಂದ ಅನುಮತಿ ದೊರೆತಿರುವುದಿಲ್ಲ. |
| ಇ) | ಸುಮಾರು 600 ಪ್ರತಿಭಾವಂತ ಬಡ ವಿದ್ಯಾರ್ಥಿಗಳ ಪ್ರವೇಶಾತಿಗೆ ಮಾಡಿರುವ ಬದಲಿ ವ್ಯವಸ್ಥೆಯೇನು? | ಮೇಲಿನ ಉಪ ಪ್ರಶ್ನೆ (ಆ) ರಂತೆ ಉದ್ಭವಿಸುವುದಿಲ್ಲ. |
| ಈ) | ಈವರೆಗೆ ಸರ್ಕಾರದ ವತಿಯಿಂದ ವೈದ್ಯಕೀಯ ಕಾಲೇಜುಗಳಿಗೆ ಮಾಡಿರುವ ಖರ್ಚು ವೆಚ್ಚಗಳೆಷ್ಟು? | ಕೇಂದ್ರ ಮತ್ತು ರಾಜ್ಯ ಸರ್ಕಾರದ ವತಿಯಿಂದ ಪ್ರತಿ ಕಾಲೇಜಿಗೆ ಕೆಳಕಂಡಂತೆ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. |

| ಕ್ರ, ಸಂ | ಕಾಲೇಜಿನ ಹೆಸರು | ಬಿಡುಗಡೆಯಾದ ಮೊತ್ತ(ಲಕ್ಷಗಳು) |
|---|---|---|
| 1 | ಚಿಕ್ಕಬಳ್ಳಾಪುರ ವೈದ್ಯಕೀಯ ಕಾಲೇಜು | ರೂ. 25,799.31 |
| 2 | ಚಿಕ್ಕಮಗಳೂರು ವೈದ್ಯಕೀಯ ಕಾಲೇಜು | ರೂ 16,666.00 |
| 3 | ಹಾವೇರಿ ವೈದ್ಯಕೀಯ ಕಾಲೇಜು | ರೂ. 12,346.12 |
| 4 | ಯಾದಗಿರಿ ವೈದ್ಯಕೀಯ ಕಾಲೇಜು | ರೂ. 16556.33 |

ಸಂಖ್ಯೆ: ಎಂಇಡಿ 602 ಎಂಎಂಸಿ 2021

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು